**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ.20.11.2024**

**ಪಾಟಿ ಸವಾಲು : ಪ್ರತಿವಾದಿಯ ಪರ ಮಾನ್ಯ ಎಜಿಪಿ ರವರಿಂದ**

1. ನಾನು ಎಂ ಎಸ್ ಸಿ ವರೆಗೆ ವಿದ್ಯಾಬ್ಯಾಸ ಮಾಡಿರುತ್ತೇನೆ. ನನಗೆ ಕನ್ನಡ ಓದಲು ಬರೆಯಲು ಬರುತ್ತದೆ. ದಾವಾ ಆಸ್ತಿಯು ನಮಗಾಗಲೀ ಅಥವಾ ನಮ್ಮ ಕುಟುಂಬದವರಿಗೆ ಮಂಜೂರು ಆಗಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ದಾವಾ ಆಸ್ತಿಯನ್ನು ಮಂಜೂರು ಮಾಡುವಂತೆ ಯಾವುದೇ ಅರ್ಜಿ ಸಲ್ಲಿಸಿರುವುದಿಲ್ಲ ಎಂದರೆ ಸರಿ. ಆವತಿ ಗ್ರಾಮದ, ಕಸಬಾ ಹೋಬಳಿಯ ಸರ್ವೆ ನಂ.22 ಆಸ್ತಿಯು ಸರ್ಕಾರಿ ಶಾಲೆಗೆ ಹಸ್ತಾಂತರ ಆಗಿದೆ ಎಂದರೆ ಸರಿ. ಸದರಿ ಆಸ್ತಿಯ ಪಹಣಿಯನ್ನು ಸಾಕ್ಷಿ ನೋಡಿ ಗುರುತಿಸಿದ ಕಾರಣ ಅದನ್ನು ನಿಡಿ-1 ಎಂದು ಗುರುತಿಸಲಾಯಿತು. ಆ ಕಾರಣದಿಂದ ದಾವಾ ಆಸ್ತಿಯಲ್ಲಿ ನಾವು ಸ್ವಾದೀನ ಹೊಂದಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-1 ರಿಂದ 6 ದಾಖಲೆಗಳು ಆವತಿ ಗ್ರಾಮ ಪಂಚಾಯಿತಿಯವರ ಜೊತೆ ಶಾಮೀಲಾಗಿ ಸೃಷ್ಟಿಮಾಡಿ ಹಾಜರು ಪಡಿಸಿದ್ದೇವೆ ಎಂದರೆ ಸರಿಯಲ್ಲ. ನಿಪಿ-9 ಈ ದಾವೆ ಸಲ್ಲಿಸಲು ಸೃಷ್ಟಿಮಾಡಿ ಹಾಜರು ಪಡಿಸಿದ್ದೇವೆ ಎಂದರೆ ಸರಿಯಲ್ಲ. ಈ ದಾವೆ ಸಲ್ಲಿಸಲು ನಮಗೆ ಯಾವುದೇ ವ್ಯಾಜ್ಯಾ ಕಾರಣ ಇಲ್ಲದೇ ಇದ್ದರೂ, ಸರ್ಕಾರಿ ಆಸ್ತಿಯನ್ನು ಕಬಳಿಸುವ ಸಲುವಾಗಿ ಸುಳ್ಳು ದಾವೆ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಮರು ವಿಚಾರಣೆಃ ಇಲ್ಲ.)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**